ತರದ ರೀತಿಯಲ್ಲಿ ಮಾತನಾಡಿರುವುದನ್ನೆಲ್ಲಾ ದಯವಿಟ್ಟು ಕಡತದಿಂದ ತೆಗೆಸಬೇಕು ಮತ್ತು ಅದೇರೀತಿ ಸೂಚನೆಯನ್ನು ತಾವು ಕೊಡಬೇಕು.

ಅಧ್ಯಕ್ಷರು:– ಅದೆಲ್ಲವನ್ನೂ ಕಡತದಿಂದ ತೆಗೆದು ಹಾಕಿ, ಯಾವುದೂ ಕಡತದಲ್ಲಿ ಇರಬಾರದು.

ಶ್ರೀ ಬಸವರಾಜು ಬೊಮ್ಮಾಯಿ (ಭಾರಿ ನೀರಾವರಿ ಸಚಿವರು):– ಮಾನ್ಯ ಅಧ್ಯಕ್ಷರೆ, adjournment motion ಸಮಯದಲ್ಲಿ ವಿರೋಧಪಕ್ಷದವರು ಏನು ಅಸಂಸದೀಯ ಪದಗಳನ್ನು ಬಳಸಿದ್ದಾರೆ ಅದನ್ನು ಕಡತದಿಂದ ತೆಗದುಹಾಕಬೇಕು ಮತ್ತು ದಯವಿಟ್ಟು Privileges Committee ಗೆ ರೆಫರ್ ಮಾಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ಪರಿಶೀಲಿಸುತ್ತೇನೆ.

4. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿ: ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಈಗ ಸಭೆಯ ಮುಂದೆ ಮಂಡಿಸುತ್ತೇನೆ.

1. ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕ, 2011
2. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ತಿದ್ದುಪಡಿ) ವಿಧೇಯಕ,2011
3. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2011.
4. ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2010
5. ಕರ್ನಾಟಕ ಧನವಿನಿಯೋಗ (ಸಂಖ್ಯೆ2) ವಿಧೇಯಕ, 2011
6. ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2011.
7. ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2011.
8. ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2011.
9. ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ,
10. ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2011
11. ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2011

12. ಕರ್ನಾಟಕ ಪೌರನಿಗಮಗಳ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2011

13. ಕರ್ನಾಟಕ ಸರ್ಕಾರಿ ಉದ್ಯಾನನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2011

14. ಕರ್ನಾಟಕ ಗೃಹರಕ್ಷಕ ದಳ (ತಿದ್ದುಪಡಿ) ವಿಧೇಯಕ, 2011

15. ಭಾರತ ರಾಷ್ಟ್ರೀಯ ಕಾನೂನು (ತಿದ್ದುಪಡಿ) ವಿಧೇಯಕ, 2011

16. ಕರ್ನಾಟಕ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸುವ ವಿಧೇಯಕ, 2011

17. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2011 (ವಿಧಾನಪರಿಷತ್ತಿನ ವಿಧೇಯಕ)

18. ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2011 (ವಿಧಾನಪರಿಷತ್ತಿನ ವಿಧೇಯಕ)

5). ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಕಾರ್ಯದರ್ಶಿ:– ವಿಧಾನ ಪರಿಷತ್ತಿನ ಅಂಗೀಕಾರವಾದ ರೂಪದಲ್ಲಿರುವ ಕರ್ನಾಟಕ (ಪ್ರಾದೇಶಿಕ ಕಾನೂನುಗಳ) ನಿರಸನಗೊಳಿಸುವ ವಿಧೇಯಕ, 2011ನ್ನು ಈಗ ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಗಿದೆ (ಅನುಬಂಧ – 1)

ಅಧ್ಯಕ್ಷರು: ಈಗ ಸದನವನ್ನು ನಾಳೆ ಬೆಳಿಗ್ಗೆ 10:30ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1 ಗಂಟೆ 52 ನಿಮಿಷಕ್ಕೆ ಮುಕ್ತಾಯಕೊಂಡು ಪುನಃ ದಿನಾಂಕ: 3ನೇ ಜೂನ್ ಮಾಹೆ 2011ರ ಶುಕ್ರವಾರ ಬೆಳಿಗ್ಗೆ 10 ಗಂಟೆ 30 ನಿಮಿಷಕ್ಕೆ ಸೇರಲು ನಿಶ್ಚಯಿಸಿತು)

ಅನುಬಂಧ – 1

ಕರ್ನಾಟಕ (ಪ್ರಾದೇಶಿಕ ಕಾನೂನುಗಳ) ನಿರಸನಗೊಳಿಸುವ ವಿಧೇಯಕ, 2011

(2011ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ – 6)

(ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿ)